RNU AIR DHARWAD

# OCTOBER 29, 2025

## AKASHAVANI - DHARWAD

## PRADESH SAMACHARA (KANNADA) 12.00 P.M.

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ಭೌಗೋಳಿಕ ಸೂಚ್ಯಂಕ ಮಾನ್ಯತೆ ಪಡೆದಿರುವ,** ರಾಜ್ಯದ ವಿಜಯಪುರ ಜಿಲ್ಲೆಯ ಇಂಡಿ ಲಿಂಬೆ ಹಣ್ಣು ಹಾಗೂ ತಮಿಳುನಾಡು ರಾಜ್ಯದ ಪುಲಿಯಾಂಕುಡಿ ಲಿಂಬೆ ಹಣ್ಣು ತಳಿಗಳು, ಯುನೈಟೆಡ್ ಕಿಂಗಡಮ್ ದೇಶಕ್ಕೆ ಮೊದಲ ಬಾರಿಗೆ ರಫ್ತಾಗುತ್ತಿರುವುದು ಸಂತಸದ ವಿಚಾರವಾಗಿದ್ದು, ಜಾಗತಿಕ ಕೃಷಿ ಮಾರುಕಟ್ಟೆಯಲ್ಲಿ ಭಾರತದ ಕೃಷಿ ಉತ್ಪನ್ನಗಳಿಗೆ ಹೆಚ್ಚಿನ ಬೇಡಿಕೆ ದೊರೆಯಲಿದೆ ಎಂದು ಕೇಂದ್ರ ವಾಣಿಜ್ಯ ಖಾತೆ ಸಚಿವರಾದ ಪಿಯೂಷ್ ಗೋಯಲ್ ಹೇಳಿದ್ದಾರೆ. ಈ ಬಗ್ಗೆ ತಮ್ಮ ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿರುವ ಸಚಿವರು, ಕೇಂದ್ರ ಸರ್ಕಾರದ ಕೃಷಿ ಮತ್ತು ಸಂಸ್ಕರಣಾ ಖಾದ್ಯ ವಸ್ತುಗಳ ರಫ್ತು ಅಭಿವೃದ್ಧಿ ನಿಗಮ– ಅಪೆಡಾ ಮೂಲಕ, ಪ್ರಪ್ರಥಮ ಬಾರಿಗೆ ಎರಡು ತಳಿ ಲಿಂಬೆ ಹಣ್ಣುಗಳನ್ನು ವಿದೇಶಕ್ಕೆ ವಿಮಾನದ ಮೂಲಕ ಸಾಗಿಸಲಾಗುತ್ತಿದೆ. ಈ ಮೈಲುಗಲ್ಲು, ರೈತರ ಸಬಲೀಕರಣಕ್ಕೆ ಸಾಕ್ಷಿಯಾಗಿದೆ ಎಂದಿದ್ದಾರೆ.

<><><>

**ವಿಜಯಪುರ ಜಿಲ್ಲೆ, ಇಟ್ಟಂಗಿಹಾಳ** ಕೈಗಾರಿಕಾ ಪ್ರದೇಶದ 50 ಎಕರೆ ಸ್ಥಳದಲ್ಲಿ ಕರ್ನಾಟಕ ಸೋಪ್ಸ್ ಅಂಡ್ ಡಿಟರ್ಜೆಂಟ್ಸ್–ಕೆ.ಎಸ್.ಡಿ.ಎಲ್ ಕಾರ್ಖಾನೆ ಸ್ಥಾಪನೆಯಿಂದ, ಹೆಚ್ಚಿನ ಜನರಿಗೆ ಉದ್ಯೋಗಾವಕಾಶ ಸಿಗಲಿದೆ, ಈ ಕುರಿತು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಮುಂದಿನ ದಿನಗಳಲ್ಲಿ ಕೈಗಾರಿಕೆ ಘಟಕ ಸ್ಥಾಪನೆಗೆ ಕ್ರಮ ವಹಿಸಲಾಗುವುದು ಎಂದು ಕೆ.ಎಸ್.ಡಿ.ಎಲ್ ಅಧ್ಯಕ್ಷ ಹಾಗೂ ಮುದ್ದೇಬಿಹಾಳ ಶಾಸಕ ಸಿ.ಎಸ್ ನಾಡಗೌಡ ಹೇಳಿದರು. ಇಟ್ಟಂಗಿಹಾಳ ಪ್ರದೇಶಕ್ಕೆ ಭೇಟಿ ನೀಡಿ, ಮಾತನಾಡಿದ ಅವರು, ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಖಾತೆ ಸಚಿವರಾದ ಎಂ.ಬಿ ಪಾಟೀಲ್, ಈಗಾಗಲೇ ಕೆ.ಎಸ್.ಡಿ.ಎಲ್ ಸಂಸ್ಥೆಗೆ ಪತ್ರ ಬರೆದು, 50 ಎಕರೆ ಜಾಗೆ ಒದಗಿಸುವ ಬಗ್ಗೆ ಒಪ್ಪಿಗೆ ಸೂಚಿಸಿದ್ದಾರೆ ಎಂದರು.

<><><>

**ಈ ಮಧ್ಯಾಹ್ನ 3 ಗಂಟೆಗೆ,** ಮೈಸೂರು ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಖಾತೆ ಸಚಿವರಾದ ಎಂ.ಬಿ ಪಾಟೀಲ್ ಅವರು, ಜಿಲ್ಲಾ ವ್ಯಾಪ್ತಿಯ ಕೈಗಾರಿಕಾ ಇಲಾಖೆ ಹಾಗೂ ಕೆ.ಐ.ಎ.ಡಿ.ಬಿ ಅಧಿಕಾರಿಗಳ ಸಭೆ ನಡೆಸಲಿದ್ದಾರೆ.

<><><>

**ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆ,** ಇಂಡಿಯಾ ಜಸ್ಟಿಸ್ ವರದಿಯ ಪ್ರಕಾರ ನಂಬರ್ ಒನ್ ಸ್ಥಾನದಲ್ಲಿದ್ದು, ಇದು ರಾಜ್ಯದ ಘನತೆ ಹೆಚ್ಚಿಸಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ಬೆಂಗಳೂರು ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಜರುಗಿದ ಪೊಲೀಸ್ ಸಿಬ್ಬಂದಿಯ ನೂತನ ಪೀಕ್ ಕ್ಯಾಪ್ ವಿತರಣೆ, ಮಾದಕ ದ್ರವ್ಯ ವಿರೋಧಿ ಕಾರ್ಯಪಡೆ ಉದ್ಘಾಟನೆ ಸಮಾರಂಭದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

<><><>

**ಕರ್ನಾಟಕ ರತ್ನ ಡಾಕ್ಟರ ಪುನೀತ್** ರಾಜಕುಮಾರ ಅವರ ನಾಲ್ಕನೇ ಪುಣ್ಯಸ್ಮರಣೆಯ ದಿನವಾದ ಇಂದು, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ಸೇರಿದಂತೆ ಗಣ್ಯರು, ಅವರ ಸಿನಿಮಾ ಕ್ಷೇತ್ರದ ಕೊಡುಗೆಗಳನ್ನು ಸ್ಮರಿಸಿದ್ದು, ಗೌರವ ನಮನಗಳನ್ನು ಸಲ್ಲಿಸಿದ್ದಾರೆ. ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನಗಳ ಖಾತೆ ಸಚಿವರಾದ ಪ್ರಲ್ಹಾದ್ ಜೋಶಿ, ತಮ್ಮ ಎಕ್ಸ್ ಖಾತೆ ಮೂಲಕ 'ಪುನೀತ್ ರಾಜಕುಮಾರ ಅವರು ತಮ್ಮ ಕಿರಿ ವಯಸ್ಸಿನಲ್ಲಿ ಗಳಿಸಿದ ಕೀರ್ತಿ, ಬಾಳಿ ಬದುಕಿದ ರೀತಿ, ಅವಿಸ್ಮರಣೀಯವಾದುದು' ಎಂದಿದ್ದಾರೆ.

<><><>

**ಕರ್ನಾಟಕ ವಿಧಾನ ಪರಿಷತ್ ಈಶಾನ್ಯ** ಶಿಕ್ಷಕರ ಕ್ಷೇತ್ರದ ಚುನಾವಣಾ ಮತದಾರರ ನೋಂದಣಿ ಪ್ರಕ್ರಿಯೆ ಈಗಾಗಲೇ ಆರಂಭವಾಗಿದ್ದು, ನಿರೀಕ್ಷಿತ ಮಟ್ಟದಲ್ಲಿ ನೋಂದಣಿಗೆ ಅಧಿಕಾರಿಗಳು ಮುತುವರ್ಜಿ  ವಹಿಸಬೇಕು ಎಂದು ಎಂದು ಕಲಬುರಗಿ ಜಿಲ್ಲಾ ಪಂಚಾಯತ್, ಉಪ ಕಾರ್ಯದರ್ಶಿ ಲಕ್ಷ್ಮಣ ಶೃಂಗೇರಿ ಹೇಳಿದರು. ಕೆ.ಬಿ.ಎನ್. ತಾಂತ್ರಿಕ ಕಾಲೇಜು ಸಭಾಂಗಣದಲ್ಲಿ, ಭಾರತ ಚುನಾವಣಾ ಆಯೋಗ, ಜಿಲ್ಲಾ ಸ್ವೀಪ್– ಮತದಾರರ ಜಾಗೃತಿ ಅಭಿಯಾನದಲ್ಲಿ ಪಾಲ್ಗೊಂಡು ಮಾತನಾಡಿದರು.  ಎಲ್ಲ ಅರ್ಹ ಮತದಾರರ ನೋಂದಣಿಗೆ, ನಾಳೆ  ಹಾಗೂ ನವೆಂಬರ್ 3 ರಂದು ಕ್ಷಿಪ್ರ ನೋಂದಣಿ ಅಭಿಯಾನ ಆಯೋಜಿಸಲಾಗಿದೆ ಎಂದರು.

<><><>

**ಉಪಲೋಕಾಯುಕ್ತ, ನ್ಯಾಯಮೂರ್ತಿ** ಬಿ.ವೀರಪ್ಪ ಅವರು ಇಂದಿನಿಂದ, 31 ರವರೆಗೆ ಮೂರು ದಿನಗಳ ಕಾಲ ಕೊಪ್ಪಳ ಜಿಲ್ಲೆ ಪ್ರವಾಸ ಕೈಗೊಂಡಿದ್ದಾರೆ. ಈ ಮಧ್ಯಾಹ್ನ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ, ಸಾರ್ವಜನಿಕರಿಂದ ದೂರು, ಅಹವಾಲು ಸ್ವೀಕರಿಸಲಿದ್ದಾರೆ.

<><><>

**ರಾಜ್ಯ ಸರ್ಕಾರ ಜಾರಿಗೊಳಿಸಿರುವ,** ಪಂಚಗ್ಯಾರಂಟಿ ಯೋಜನೆಗಳು ಬಡಜನರನ್ನು ಆರ್ಥಿಕವಾಗಿ ಸಬಲರನ್ನಾಗಿಸುತ್ತಿದೆ, ಇದು ಆಡಳಿತ ಕ್ಷೇತ್ರದ ಕ್ರಾಂತಿಕಾರಕ ಹೆಜ್ಜೆಯಾಗಿದೆ ಎಂದು ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ ಅವರು ಹೇಳಿದರು. ಗದಗ ನಗರದ ಜಿಲ್ಲಾ ಪಂಚಾಯತ್ ಸಭಾಭವನದಲ್ಲಿ, ಗದಗ ತಾಲೂಕು ಮಟ್ಟದ ಗ್ಯಾರಂಟಿ ಯೋಜನಾ ಸಮಿತಿ, ಪ್ರಗತಿ ಪರಿಶೀಲನಾ ಸಭೆ ನೇತೃತ್ವ ವಹಿಸಿ ಅವರು ಮಾತನಾಡಿದರು. ಪಂಚ ಗ್ಯಾರಂಟಿ ಯೋಜನೆಗಳ ಅನು   ್ಠಾನವು ಬಡಜನರ ಸೇವೆ ಮಾಡಲು ಒದಗಿದ ಬಹುದೊಡ್ಡ ಅವಕಾಶವಾಗಿದೆ ಎಂದರು.

<><><>

**ಕೊಡಗು ಜಿಲ್ಲೆ, ಮದೆನಾಡು** ಗ್ರಾಮದ 6 ನೇ ತರಗತಿ ವಿದ್ಯಾರ್ಥಿನಿ ಸಿಂಚನಾ ವಿಶಿಷ್ಟ ಯೋಗ ಪ್ರದರ್ಶನದ ಮೂಲಕ ದಾಖಲೆ ನಿರ್ಮಿಸಿದ್ದಾರೆ. ಖಂಡಪೀಡಾಸನದಲ್ಲಿ, 1 ನಿಮಿಷ 44 ಸೆಕೆಂದುಗಳು, ಧನುರಾಸನದಲ್ಲಿ ಒಂದು ನಿಮಿಷ ಸುತ್ತುವುದು ಹಾಗೂ ಡಿಂಬಾಸನದಲ್ಲಿ ಒಂದು ನಿಮಿಷದಲ್ಲಿ, 15 ಸುತ್ತು ಹಾಕುವ ಮೂಲಕ ದಾಖಲೆ ನಿರ್ಮಿಸಿದ್ದಾರೆ. ಸಿಂಚನಾ ಅವರನ್ನು ಅಭಿನಂದಿಸಿ, ಮಾತನಾಡಿದ ಮುಖ್ಯಮಂತ್ರಿಗಳ ಕಾನೂನು ಸಲಹೆಗಾರ ಎ.ಎಸ್ ಪೊನ್ನಣ್ಣ, ಮಕ್ಕಳ ಕ್ರಿಯಾಶೀಲ ಹಾಗೂ ಸೃಜನಶೀಲ ಚಟುವಟಿಕೆಗಳಿಗೆ ಪೋಷಕರು ಹಾಗೂ ಶಿಕ್ಷಕರ ಮಾರ್ಗದರ್ಶನ ಅಗತ್ಯ ಎಂದರು.

<><><>

**ಮಂಗಳೂರಿನಲ್ಲಿ ಆಯೋಜಿತ** 'ಚೀಫ್ ಮಿನಿಸ್ಟರ್ಸ್ ಮಂಗಳೂರು ಇಂಡಿಯಾ ಇಂಟರ್‌ನ್ಯಾ   ‍ನ ಲ್ ಚಾಲೆಂಜ್ 2025– ಅಂತಾರಾಷ್ಟ್ರೀಯ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ, ಇಂದು ಅಂತಿಮ ಹಂತದ ಅರ್ಹತಾ ಸುತ್ತಿನ ಪಂದ್ಯಗಳು ಜರುಗಲಿವೆ.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ**

<><><>